ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 02 ಇಎಸ್‌ಟಿ (8) 2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 09-02-2022.

## ಹಿಂಬರಹ

ಸರ್ಕಾರದ ಆದೇಶ ಸಂಖ್ಯೆ: ಆಇ 10(ಇ) ಸೇನಿಸೇ 2021 ದಿನಾಂಕ: 20-12-2021, ಸರ್ಕಾರದ ಆದೇಶ ಸಂಖ್ಯೆ: ಆಇ 8 ಮಕಮು 2021 ದಿನಾಂಕ: 14-12-2021, ಸರ್ಕಾರದ ಆದೇಶ ಸಂಖ್ಯೆ: ಆಇ 181 ಪಿಇಎನ್ 2021 ದಿನಾಂಕ: 06-12-2021, ಸರ್ಕಾರದ ಆದೇಶ ಸಂಖ್ಯೆ: ಆಇ 162 ಆಖಇ 2021 ದಿನಾಂಕ: 28-11-2021 ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 36 ಎಸ್‌ಆರ್‌ಸಿ 2021 ದಿನಾಂಕ: 14-12-2021, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 65 ಸೇನಿಸಿ 2021 ದಿನಾಂಕ: 10-12-2021 ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: FD 685 Exp-12/2021 ದಿನಾಂಕ: 29-11-2021 ರ ಪ್ರತಿಗಳನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ:**

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಜಂಟಿ ನಿರ್ದೇಶಕರು (ಆಡಳಿತ)/ (ಯೋಜನೆ)/ (ಸಿಡಿಸಿ)/ (ಎಟಿಎಸ್), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ, ರಿಜಿಸ್ಟ್ರಾರ್ (ಆಡಳಿತ), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ಎಲ್ಲಾ ಅಧಿಕಾರಿಗಳು /ಸಿಬ್ಬಂದಿಗಳಿಗೆ, ಮಾಹಿತಿಗಾಗಿ.
3. ಆಯುಕ್ತರ ಆಪ್ತಶಾಖೆಗೆ.
4. ನಿರ್ದೇಶಕರ ಆಪ್ತಶಾಖೆಗೆ.
5. ಆಯುಕ್ತಾಲಯದ ಸಂಬಂಧಪಟ್ಟ ಎಲ್ಲಾ ವಿಭಾಗಗಳ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 7(ಇ) ಸೇನಿಸೇ 2020, ದಿನಾಂಕ:28/01/2021.

ಪ್ರಸ್ತಾವನೆ:

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118 (2)(i) ರಲ್ಲಿ ಸರ್ಕಾರಿ ನೌಕರರು ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ (ಆಯಾ ವರ್ಷದ ಜನವರಿ 1 ರಿಂದ ಪ್ರಾರಂಭಗೊಂಡಂತೆ ಡಿಸೆಂಬರ್ 31 ರವರೆಗೆ) 15 ದಿನಗಳಿಗೆ ಮೀರದಂತೆ ಗಳಿಕೆ ರಜೆಯನ್ನು ಅಧ್ಯರ್ಪಿಸಲು ಮತ್ತು ರಜೆ ವೇತನಕ್ಕೆ ನಗದೀಕರಣ ಸೌಲಭ್ಯವನ್ನು ಪಡೆಯಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಓದಲಾದ ಸರ್ಕಾರಿ ಆದೇಶದಲ್ಲಿ 2021 ನೇ ಸಾಲಿನ ಬ್ಲಾಕ್ ಅವಧಿಗೆ ಗಳಿಕೆ ರಜೆ ಅಧ್ಯರ್ಪಣೆ ಮತ್ತು ನಗದೀಕರಣದ ಯೋಜನೆಯನ್ನು ಜಾರಿಗೊಳಿಸಲಾಗಿತ್ತು. ಸದರಿ ಯೋಜನೆಯ ಅವಧಿಯು ದಿನಾಂಕ:31/12/2021ರಂದು ಮುಕ್ತಾಯಗೊಳ್ಳುತ್ತದೆ.

ಪ್ರಸ್ತುತ, ಸರ್ಕಾರವು 2022ನೇ ಸಾಲಿನ ಬ್ಲಾಕ್ ಅವಧಿಯಲ್ಲಿ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜೆ ವೇತನಕ್ಕೆ ನಗದೀಕರಣ ಪಡೆಯುವ ಅವಕಾಶವನ್ನು ಕಲ್ಪಿಸಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಆಇ 10(ಇ) ಸೇನಿಸೇ 2021 ಬೆಂಗಳೂರು, ದಿನಾಂಕ:20.12.2021

ಸರ್ಕಾರವು 2022 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ ರಾಜ್ಯ ಸರ್ಕಾರಿ ನೌಕರರು ಗರಿಷ್ಟ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಎಲ್ಲಾ ವೃಂದದ ಅರ್ಹ ಅಧಿಕಾರಿ/ನೌಕರರು ಒಂದು ತಿಂಗಳ ಮುಂಚಿತ ನೋಟಿಸ್ ನೀಡಿ ಜನವರಿ 2022 ರಿಂದ ಡಿಸೆಂಬರ್ 2022 ರವರೆಗಿನ ಅವಧಿಯಲ್ಲಿ ಅವರ ಇಚ್ಛೆಯಂತೆ ಯಾವುದೇ ತಿಂಗಳಿನಲ್ಲಿ ಗಳಿಕೆ ರಜೆ ನಗದೀಕರಣದ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

ಗೆಜೆಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2022ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ, ಹೆಚ್.ಆರ್.ಎಂ.ಎಸ್ ನಲ್ಲಿ ಲಭ್ಯವಿರುವ ಅಧಿಕಾರಿಗಳ ಗಳಿಕೆ ರಜೆ ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮ ವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದ್ದು.

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 118ರಲ್ಲಿ ನಿಯಮಿಸಿರುವಂತಹ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತವೆ. ಈ ಆದೇಶವು ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗೊಳಪಟ್ಟು ನಿಯತಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/12/21

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1).
ದೂ: 080-22033135

3739
30/12/21

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ ಇವರಿಗೆ;

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-539, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ/Web portal.

ಕ್ರಮ ಸಂಖ್ಯೆ:1 ರಿಂದ 3 ಹಾಗೂ 10 ರಿಂದ 17ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ।
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.

E-515

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡದ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: 1. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ಇವರ ಮನವಿ ಪತ್ರ ದಿನಾಂಕ:04/12/2021.

2. ಸರ್ಕಾರದ ಆದೇಶ ಸಂಖ್ಯೆ: ಆಇ 19 ಮಕಮು 2018, ದಿನಾಂಕ:11/01/2019.

ಪ್ರಸ್ತಾವನೆ:

ಮೇಲೆ ಕ್ರಸಂ. (1) ರಲ್ಲಿ ಓದಲಾದ ದಿನಾಂಕ:04/12/2021 ರ ಪತ್ರದಲ್ಲಿ ದಿನಾಂಕ:28/10/2021 ರಂದು ನಡೆದ ರಾಜ್ಯ ಮಟ್ಟದ ಜಂಟಿ ಸಮಾಲೋಚನಾ ಸಮಿತಿ ಸಭೆಯಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಹಬ್ಬದ ಮುಂಗಡದ ಮೊತ್ತವನ್ನು ರೂ.10,000/- ಗಳಿಂದ ರೂ.25,000/- ಗಳಿಗೆ ಹೆಚ್ಚಳ ಮಾಡುವ ಬಗ್ಗೆ ಚರ್ಚಿಸಿ, ಈ ಬಗ್ಗೆ ಆರ್ಥಿಕ ಇಲಾಖೆಯು ಪರಿಶೀಲಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ, ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ಇವರು, ರಾಜ್ಯ ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡವನ್ನು ರೂ.10,000/- ಗಳಿಂದ ರೂ.25,000/- ಗಳಿಗೆ ಹೆಚ್ಚಳ ಮಾಡುವಂತೆ ಕೋರಿರುತ್ತಾರೆ.

ಮೇಲೆ ಕ್ರಸಂ.(2)ರಲ್ಲಿ ಓದಲಾದ ದಿನಾಂಕ:11/01/2019 ರ ಆದೇಶದಲ್ಲಿ 6ನೇ ವೇತನ ಆಯೋಗದ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿದ್ದ ಹಬ್ಬದ ಮುಂಗಡವನ್ನು ರೂ.5,000/- ಗಳಿಂದ ರೂ.10,000/- ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ರಾಜ್ಯ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಹಬ್ಬದ ಮುಂಗಡವು ಬಡ್ಡಿ ರಹಿತವಾಗಿದ್ದು, ಅದನ್ನು ಪಡೆದ ಮುಂದಿನ 10 ತಿಂಗಳ ಅವಧಿಯಲ್ಲಿ ಮರುಪಾವತಿಯಾಗುವುದರಿಂದ ಹಬ್ಬದ ಮುಂಗಡವನ್ನು ಪರಿಷ್ಕರಿಸಿ ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಇ 8 ಮಕಮು 2021,

ಬೆಂಗಳೂರು,. ದಿನಾಂಕ: 14/12/2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸಿವಿಲ್ ಸೇವಾ ವೃಂದದಲ್ಲಿ ಖಾಯಂ ಆಗಿ ಸೇರ್ಪಡೆಯಾಗಿರುವ ಅಖಿಲ ಭಾರತ ಸೇವೆಯ ಅಧಿಕಾರಿಗಳು ಸೇರಿದಂತೆ ಒಬ್ಬ ಖಾಯಂ ಸರ್ಕಾರಿ ನೌಕರನಿಗೆ ಒಂದು ಆರ್ಥಿಕ ವರ್ಷದಲ್ಲಿ ಒಂದು ಬಾರಿಗೆ ಮಾತ್ರ ಪ್ರಸ್ತುತ ಮಂಜೂರು ಮಾಡಲಾಗುತ್ತಿರುವ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರೂ.10,000/- ಗಳಿಂದ ರೂ.25,000/- ಗಳಿಗೆ ಹೆಚ್ಚಿಸಿ ಆದೇಶಿಸಿದೆ.

2...

1741
30/12/21

ದಿನಾಂಕ:21/10/1994 ರ ಸರ್ಕಾರಿ ಆದೇಶ ಸಂಖ್ಯೆ: ಆಇ 43 ಮಕಮು 1994 ರಲ್ಲಿ ಮುಂಗಡಗಳನ್ನು ಮಂಜೂರು ಮಾಡಲು ಅನುಸರಿಸುತ್ತಿರುವ ಷರತ್ತು ಮತ್ತು ನಿಬಂಧನೆಗಳು ಮುಂದುವರೆದು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ. ಧಾಯಮಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ & ಮುಂಗಡಗಳು).
14/08/18

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು.

ಪ್ರತಿ:
1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ / ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಎಲ್ಲಾ ಕಾರ್ಯದರ್ಶಿಗಳು.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್ ಸಚಿವಾಲಯ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಎಫ್.ಆರ್. & ಬಿ.ಸಿ.ಸಿ.), ವಿಧಾನ ಸೌಧ, ಬೆಂಗಳೂರು (ಕರ್ನಾಟಕ ಆರ್ಥಿಕ ಸಂಹಿತೆಗೆ ಸೂಕ್ತ ತಿದ್ದುಪಡಿ ಹೊರಡಿಸಲು ಕ್ರಮ ಕೈಗೊಳ್ಳಲು).
12. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-2), ವಿಧಾನ ಸೌಧ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
14. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್-ಲೋಡ್ ಮಾಡಲು.
15. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಅಧಿಕಾರಿ/ನೌಕರರು ಪಿಂಚಣಿ ನಿಧಿ ಮತ್ತು ಹೂಡಿಕೆ ಮಾದರಿಯ ಆಯ್ಕೆ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 04 ಪಿಇಟಿ 2005, ದಿನಾಂಕ: 31.03.2006.
2. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ: F.No.1/3/2016-PR., ದಿನಾಂಕ: 31.01.2019.
3. ಖಜಾನೆ ಆಯುಕ್ತರ ಪತ್ರ ಸಂಖ್ಯೆ: DOT/NPS0ADM(GLC)/1/2020, ದಿನಾಂಕ: 28.09.2021.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ದಿನಾಂಕ: 01.04.2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು (ಎನ್.ಪಿ.ಎಸ್.) ಕಡ್ಡಾಯಗೊಳಿಸಲಾಗಿದೆ ಹಾಗೂ ಎನ್.ಪಿ.ಎಸ್. ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಟಯರ್-I ಖಾತೆ ಹೊಂದುವುದು ಕಡ್ಡಾಯವಾಗಿದ್ದು, ಟಯರ್-I ಖಾತೆಯಲ್ಲಿ ನೌಕರನ ಮೂಲವೇತನ ಮತ್ತು ತುಟ್ಟಿಭತ್ಯೆಯ ಶೇ.10ರಷ್ಟು ಹಾಗೂ ಸರ್ಕಾರದ ವಂತಿಗೆ ದಿನಾಂಕ: 01.04.2019ರಿಂದ ಶೇ. 14ರಷ್ಟು ಭರಿಸಲಾಗುತ್ತಿದೆ (ಸರ್ಕಾರದ ವಂತಿಗೆ ದಿನಾಂಕ: 01.04.2006 ರಿಂದ 31.03.2019ರವರೆಗೆ ಶೇ.10ರಷ್ಟು).

ಮೇಲೆ ಓದಲಾದ (3) ರ ಖಜಾನೆ ಆಯುಕ್ತರ ಪತ್ರದಲ್ಲಿ ಎನ್.ಪಿ.ಎಸ್. ಯೋಜನೆಗೆ ಒಳಪಡುವ ಅಧಿಕಾರಿ/ನೌಕರರಿಗೆ ಕೇಂದ್ರ ಸರ್ಕಾರದ ಅಧಿಸೂಚನೆ ದಿನಾಂಕ: 31.01.2019ರಂತೆ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಪಿಂಚಣಿ ನಿಧಿ ಆಯ್ಕೆ ಮತ್ತು ಹೂಡಿಕೆ ಮಾದರಿ ಆಯ್ಕೆಯನ್ನು ಎನ್.ಪಿ.ಎಸ್. ಪ್ರಾನ್‌ದಾರರಿಗೆ ನೀಡುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 181 ಪಿಇಎನ್ 2021, ಬೆಂಗಳೂರು,**
**ದಿನಾಂಕ: 06.12.2021**

ಭಾರತ ಸರ್ಕಾರದ ದಿನಾಂಕ: 31.01.2019ರ ಅಧಿಸೂಚನೆಯನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಅಧಿಕಾರಿ/ನೌಕರರಿಗೆ ಪಿಂಚಣಿ ನಿಧಿ ಮತ್ತು ಹೂಡಿಕೆ ಮಾದರಿಯಲ್ಲಿ ಆಯ್ಕೆ ಮಾಡುವ ಸಂಬಂಧ ಈ ಕೆಳಕಂಡಂತೆ ಆದೇಶಿಸಿದೆ:-

**1. ಪಿಂಚಣಿ ನಿಧಿ (pension fund) ಆಯ್ಕೆ:** ಖಾಸಗಿ ವಲಯದ ನೌಕರರಿಗೆ ಲಭ್ಯವಿರುವ ಪಿಂಚಣಿ ನಿಧಿ ವ್ಯವಸ್ಥಾಪಕರು (Pension Fund Mangers) ಗಳ ಆಯ್ಕೆ ಸೌಲಭ್ಯವನ್ನು ಸರ್ಕಾರಿ ನೌಕರರಿಗೂ ವಿಸ್ತರಿಸಲಾಗಿದೆ. ಅದರನ್ವಯ ಯಾವುದಾದರೂ ಒಂದು ಪಿಂಚಣಿ ನಿಧಿ ವ್ಯವಸ್ಥಾಪಕರುಗಳನ್ನು ಖಾಸಗಿ ವಲಯದ ಪಿಂಚಣಿ ನಿಧಿ ಒಳಗೊಂಡಂತೆ ಆಯ್ಕೆ ಮಾಡಬಹುದಾಗಿರುತ್ತದೆ. ಈಗಾಗಲೇ ಚಾಲ್ತಿಯಲ್ಲಿರುವ ಮೂರು ಪಿ.ಎಫ್.ಎಂ. ಗಳು ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ನೌಕರರಿಗೂ ಹಾಗೂ ಹೊಸದಾಗಿ ನೇಮಕಗೊಳ್ಳುವ ಸರ್ಕಾರಿ ನೌಕರರಿಗೂ ಇನ್ನು ಮುಂದೆಯೂ ಪೂರ್ವನಿಯೋಜಿತ (default) ಆಯ್ಕೆಯಾಗಿ ಮುಂದುವರೆಯುತ್ತವೆ.

2. ಹೂಡಿಕೆ ಮಾದರಿಯಲ್ಲಿ ಆಯ್ಕೆ: ಪಿಂಚಣಿ ನಿಧಿ ನಿಯಂತ್ರಣ ಅಭಿವೃದ್ಧಿ ಪ್ರಾಧಿಕಾರ ರವರ ಮಾರ್ಗದರ್ಶನದನ್ವಯ ಪ್ರಸ್ತುತ ಹೂಡಿಕೆ ಮಾಡುತ್ತಿರುವ ಪಿ.ಎಫ್.ಎಂ.ಗಳ ಆಯ್ಕೆ ಇನ್ನು ಮುಂದೆ ಸರ್ಕಾರಿ ನೌಕರರಿಗೆ ಪೂರ್ವನಿಯೋಜಿತ (default) ಆಯ್ಕೆ ಆಗಿರುತ್ತದೆ. ಒಂದು ವೇಳೆ ನೌಕರರು ಬಯಸಿದಲ್ಲಿ ಈ ಕೆಳಕಂಡಂತೆ ಹೂಡಿಕೆಯ ಆಯ್ಕೆ ಮಾಡಬಹುದಾಗಿರುತ್ತದೆ:-

a. Government Employees who prefer a fixed return with minimum amount of risk may be given an option to invest 100% of the funds in Government Securities (Scheme G).

b. Government Employees who prefer higher returns may be given the options of the following two Life Cycle based schemes.

   i. Conservative Life Cycle Fund with maximum exposure to equity capped at 25%-LC-25.
   ii. Moderate Life Cycle Fund with maximum exposure to equity capped at 50%-LC-50.

3. ಆಯ್ಕೆ ಮಾಡಿರುವ ಪಿ.ಎಫ್.ಎಂ.ಗಳಲ್ಲಿ ಎನ್.ಪಿ.ಎಸ್. ಮೊತ್ತವನ್ನು ಹೂಡಿಕೆ ಮಾಡುವ ಬಗ್ಗೆ: ಈಗಿರುವ ಪೆನ್ಷನ್ ಫಂಡ್ ಮ್ಯಾನೇಜರ್‌ಗಳಿಂದ ಹಾಗೂ ಸ್ಕೀಂಗಳಿಂದ ಆಯ್ಕೆಯನ್ನು ಹೊಸ ಫಂಡ್ ಮ್ಯಾನೇಜರ್ ಮತ್ತು ಸ್ಕೀಂಗಳಿಗೆ ಬದಲಿಸುವಲ್ಲಿ, ಸರ್ಕಾರಿ ನೌಕರರಿಗೆ ಸಂಬಂಧಿಸಿದ ರೂ. ಒಂದು ಲಕ್ಷ ಕೋಟಿಗಳಿಗಿಂತ ಹೆಚ್ಚಿಗೆಯಿದ್ದಲ್ಲಿ ಅಂತಹ ಹೆಚ್ಚಿನ ಮೊತ್ತವನ್ನು ವರ್ಗಾಯಿಸುವುದರಿಂದ ಮಾರುಕಟ್ಟೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ. ಈಗಾಗಲೇ ನಿಧಿಯಲ್ಲಿ ಸಂಗ್ರಹವಾಗಿರುವ ಹಣಕ್ಕೆ ಸಂಬಂಧಿಸಿದಂತೆ ಪಿ.ಎಫ್.ಎಂ. ಮತ್ತು ಹೂಡಿಕೆಯನ್ನು ಒಮ್ಮೆಲೆ ಬದಲಿಸಲು ಸರ್ಕಾರಿ ನೌಕರರಿಗೆ ಅವಕಾಶ ನೀಡುವುದು ವಾಸ್ತವಿಕವಾಗಿ ಪಿ.ಎಫ್.ಆರ್.ಡಿ.ಎ.ರವರಿಗೆ ಸಾಧ್ಯವಾಗದೇ ಇರಬಹುದು. ಆದುದರಿಂದ ಪ್ರಸ್ತುತ ಪಿ.ಎಫ್.ಎಂ. ಮತ್ತು ಹೂಡಿಕೆ ಆಯ್ಕೆಯ ಬದಲಾವಣೆಯನ್ನು ಮುಂದಿನ ವಂತಿಗೆ/ಜಮೆಗಳಿಗೆ ಸಂಬಂಧಿಸಿದಂತೆ ಮಾತ್ರ ಅವಕಾಶ ಕಲ್ಪಿಸಿದೆ.

4. ಈಗಾಗಲೇ ಸಂಗ್ರಹವಾದ ಮೊತ್ತವನ್ನು ನಿಗದಿತ ಅವಧಿಯೊಳಗೆ ವರ್ಗಾವಣೆ ಮಾಡುವುದು: ಈಗಾಗಲೇ ಸಂಗ್ರಹವಾದ ಹಣವನ್ನು ಸರ್ಕಾರಿ ನೌಕರರ ಆಯ್ಕೆಗಳ ಮೇರೆಗೆ ವರ್ಗಾವಣೆ ಮಾಡುವ ಬಗ್ಗೆ ಪಿ.ಎಫ್.ಆರ್.ಡಿ.ಎ. ರವರು ಒಂದು ಯೋಜನೆಯನ್ನು ರೂಪಿಸಿದ ನಂತರ ಸದರಿ ಯೋಜನೆಯನ್ವಯ ಐದು ವರ್ಷದ ಅವಧಿಯೊಳಗೆ ಸಂಗ್ರಹಣೆಯಾದ ಮೊತ್ತವನ್ನು ಹೊಸ ಪಿ.ಎಫ್.ಎಂ.ಗಳಲ್ಲಿ ಹೂಡಿಕೆಗೆ ವರ್ಗಾಯಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕುಮುಟಾ ಪ್ರಕಾಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ ಮತ್ತು
ಆರ್ಥಿಕ ಆಯೋಗ ಕೋಶ).
06/12/2021

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ.

ಪ್ರತಿ:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು.
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್ ರಾಜ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
10. ಜಂಟಿ ನಿರ್ದೇಶಕರು, ನೂತನ ಪಿಂಚಣಿ ಯೋಜನೆ ಘಟಕ, 5 ಮತ್ತು 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು..
11. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ದೇವರಾಜ್ ಅರಸ್ ರಸ್ತೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

www.finance.karnataka.gov.in

EST 8 / 12

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಜಯನಗರ ನೂತನ ಜಿಲ್ಲೆ ರಚಿಸಿರುವ ಕಾರಣ ಹೊಸಪೇಟೆ ಉಪ ಖಜಾನೆಯನ್ನು ವಿಜಯನಗರ ಜಿಲ್ಲಾ ಖಜಾನೆಯನ್ನಾಗಿ ಪರಿವರ್ತಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ/4/ಎಲ್.ಆರ್.ಡಿ/2019 ದಿನಾಂಕ:08-02-2021.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇ-ಸಿಆಸುಇ/100/ಸೇಲಸೆ/2021, ದಿನಾಂಕ:26-02-2021
3. ಖಜಾನೆ ಆಯುಕ್ತರು, ಬೆಂಗಳೂರು ಇವರ ಪತ್ರ ಸಂಖ್ಯೆ:ಖನಿ/ಪ್ರಕ್ರಿಯೆ/100/2020-21 ದಿನಾಂಕ: 22-09-2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1)ರ ಸರ್ಕಾರದ ಅಧಿಸೂಚನೆಯಲ್ಲಿ, ಬಳ್ಳಾರಿ ಜಿಲ್ಲೆಯನ್ನು ವಿಭಜಿಸಿ, ಹೊಸಪೇಟೆ ಕೇಂದ್ರಸ್ಥಾನವನ್ನಾಗಿಸಿ, ನೂತನ ವಿಜಯನಗರ ಜಿಲ್ಲೆಯನ್ನು ರಚಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ನೂತನ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ಕಛೇರಿಗಳ ಕಾರ್ಯಾರಂಭ ಮಾಡುವ ಸಲುವಾಗಿ ಹುದ್ದೆಗಳ ವಿವರಗಳನ್ನು ನಿಗದಿಪಡಿಸಿ, ಇದಕ್ಕೆ ಬೇಕಾಗಿರುವ ಕಟ್ಟಡಗಳು ಮತ್ತು ಸಾಮಗ್ರಿಗಳು ಹಾಗೂ ಎಲ್ಲಾ ಪೂರ್ವ ಸಿದ್ಧತೆಗಳನ್ನು ಮಾಡಲು ಶ್ರೀ ಅನಿರುದ್ ಶ್ರವಣ್. ಪಿ., ಭಾ.ಆ.ಸೇ, ಆಯುಕ್ತರು, ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಬೆಂಗಳೂರು ಇವರನ್ನು ವಿಜಯನಗರ ಜಿಲ್ಲೆಯ ವಿಶೇಷ ಅಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರ.ಸಂ: (2)ರ ಅಧಿಸೂಚನೆಯಲ್ಲಿ ನೇಮಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (3) ಖಜಾನೆ ಆಯುಕ್ತರ ಪ್ರಸ್ತಾವನೆಯಲ್ಲಿ ನೂತನವಾಗಿ ವಿಜಯನಗರ ಜಿಲ್ಲೆಯನ್ನು ರಚಿಸಿರುವುದರಿಂದ ಹೊಸಪೇಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಖಜಾನೆಯನ್ನು ವಿಜಯನಗರ ಜಿಲ್ಲಾ ಖಜಾನೆಯನ್ನಾಗಿ ಪರಿವರ್ತಿಸಲು, ಹಾಗೂ ಈ ಕೆಳಕಂಡಂತೆ ಹುದ್ದೆಗಳನ್ನು ಸೃಜನೆ ಮತ್ತು ಮರುವಿನ್ಯಾಸಗೊಳಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

| ಕ್ರ.ಸಂ. | ಹುದ್ದೆಗಳ ವಿವರ | ಹೊಸಪೇಟೆ ತಾಲ್ಲೂಕು ಖಜಾನೆಯಲ್ಲಿ ಖಾಲಿ ಇರುವ ಹುದ್ದೆ ಸಂಖ್ಯೆ | ಬಳ್ಳಾರಿ ಜಿಲ್ಲಾ ಖಜಾನೆಯಿಂದ ಮರು ವಿನ್ಯಾಸಗೊಳಿಸಬೇಕಾದ ಹುದ್ದೆ ಸಂಖ್ಯೆ | ಸೃಜಿಸಬೇಕಾದ ಹುದ್ದೆ ಸಂಖ್ಯೆ | ಒಟ್ಟು |
|---|---|---|---|---|---|
| 1. | ಉಪ ನಿರ್ದೇಶಕರು | 0 | 0 | 1 | 1 |
| 2. | ಸಹಾಯಕ ನಿರ್ದೇಶಕರು | 1 | 0 | 0 | 1 |
| 2 | ಸಹಾಯಕ ಖಜಾನಾಧಿಕಾರಿ | 0 | 0 | 2 | 2 |
| 3 | ಮುಖ್ಯ ಲೆಕ್ಕಿಗರು | 3 | 3 | 2 | 8 |

.....2

| | | | | | |
|---|---|---|---|---|---|
| 4 | ಪ್ರಥಮ ದರ್ಜೆ ಸಹಾಯಕರು | 4 | 8 | 4 | 16 |
| 5 | ದ್ವಿತೀಯ ದರ್ಜೆ ಸಹಾಯಕರು | 1 | 4 | 2 | 7 |
| 6 | ಬೆರಳಚ್ಚುಗಾರರು | 0 | 0 | 1 | 1 |
| 7 | ಗ್ರೂಪ್-ಡಿ | 1 | 0 | 2 | 3 |
| ಒಟ್ಟು | | | | | 39 |

ಆಯುಕ್ತರು, ಖಜಾನೆ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮುಂದಿನಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 162 ಆಖಇ 2021 ಬೆಂಗಳೂರು, ದಿನಾಂಕ:26ನೇ ನವೆಂಬರ್ 2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಹೊಸದಾಗಿ ಸೃಜಿಸಲಾದ ವಿಜಯನಗರ ಜಿಲ್ಲಾ ಖಜಾನೆ ವ್ಯಾಪ್ತಿಗೆ ಬರುವ ಈ ಕೆಳಕಂಡ ಉಪ ಖಜಾನೆಗಳನ್ನು ಈಗಿರುವ ಜಿಲ್ಲಾ ಕೇಂದ್ರಗಳ ವ್ಯಾಪ್ತಿಯಿಂದ ಬೇರ್ಪಡಿಸಿ ಹೊಸ ಜಿಲ್ಲಾ ಖಜಾನೆಯ ವ್ಯಾಪ್ತಿಗೆ ತರಲಾಗಿದೆ.ಈ ನೂತನ ಜಿಲ್ಲಾ ಖಜಾನೆಯು ದಿನಾಂಕ:01-04-2022 ರಿಂದ ಪ್ರತ್ಯೇಕ ಲೆಕ್ಕದಿಂದ ಕಾರ್ಯಾರಂಭ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ನೂತನ ಜಿಲ್ಲಾ ಖಜಾನೆಯ ವ್ಯಾಪ್ತಿಯು ಈ ಕೆಳಕಂಡಂತಿರುತ್ತದೆ.

| ನೂತನ ಜಿಲ್ಲಾ ಖಜಾನೆಯ ಹೆಸರು | ಕೇಂದ್ರ ಸ್ಥಾನ | ವ್ಯಾಪ್ತಿಗೆ ಒಳಪಡುವ ಉಪ ಖಜಾನೆಗಳು | ಏಜೆನ್ಸಿ ಬ್ಯಾಂಕ್ ಗಳ ಹೆಸರು |
|---|---|---|---|
| 1 | 2 | 3 | 4 |
| ವಿಜಯನಗರ ಜಿಲ್ಲಾ ಖಜಾನೆ | ಹೊಸಪೇಟೆ | ಕೂಡ್ಲಿಗಿ | ಎಸ್.ಬಿ.ಐ |
| | | ಹಗರಿಬೊಮ್ಮನಹಳ್ಳಿ | ಎಸ್.ಬಿ.ಐ |
| | | ಕೊಟ್ಟೂರು | ಎಸ್.ಬಿ.ಐ |
| | | ಹೂವಿನಹಡಗಲಿ | ಎಸ್.ಬಿ.ಐ |
| | | ಹರಪನಹಳ್ಳಿ | ಎಸ್.ಬಿ.ಐ |

ಹೊಸದಾಗಿ ರಚನೆಯಾಗಿರುವ ವಿಜಯನಗರ ಜಿಲ್ಲೆಗೆ ಜಿಲ್ಲಾ ಖಜಾನೆ ಸ್ಥಾಪಿಸಲು ಹೊಸಪೇಟೆ ಉಪ ಖಜಾನೆಗೆ ಸೃಜಿಸಲಾಗಿರುವ 10 ಹುದ್ದೆಗಳನ್ನು ಹೊರತುಪಡಿಸಿ ಬಳ್ಳಾರಿ ಜಿಲ್ಲಾ ಖಜಾನೆಯಿಂದ 15 ಹುದ್ದೆಗಳನ್ನು ಈ ಕೆಳಕಂಡಂತೆ ಮರುವಿನ್ಯಾಸಗೊಳಿಸಲು ಅನುಮೋದನೆ ನೀಡಿದೆ.

....3

| ಕ್ರ. ಸಂ. | ಹುದ್ದೆಗಳ ವಿವರ | ಹೊಸಪೇಟೆ ಖಜಾನೆಯಲ್ಲಿ ಹಾಲಿ ಇರುವ ಹುದ್ದೆಗಳ ಸಂಖ್ಯೆ | ಬಳ್ಳಾರಿ ಜಿಲ್ಲಾ ಖಜಾನೆಯಿಂದ ಮರುವಿನ್ಯಾಸಗೊಳಿಸಲಾಗಿರುವ ಹುದ್ದೆಗಳ ಸಂಖ್ಯೆ |
|---|---|---|---|
| 1 | ಉಪ ನಿರ್ದೇಶಕರು | 0 | 0 |
| 2 | ಸಹಾಯಕ ನಿರ್ದೇಶಕರು | 1 | 0 |
| 3 | ಸಹಾಯಕ ಖಜಾನಾಧಿಕಾರಿ | 0 | 0 |
| 4 | ಮುಖ್ಯ ಲೆಕ್ಕಿಗರು | 3 | 3 |
| 5 | ಪ್ರಥಮ ದರ್ಜೆ ಸಹಾಯಕರು | 4 | 8 |
| 6 | ದ್ವಿತೀಯ ದರ್ಜೆ ಸಹಾಯಕರು | 1 | 4 |
| 7 | ಬೆರಳಚ್ಚುಗಾರರು | 0 | 0 |
| 8 | ಗ್ರೂಪ್-ಡಿ | 1 | 0 |
| | ಒಟ್ಟು | 10 | 15 |

- ಖಜಾನೆಗಳಲ್ಲಿ ಪಾವತಿಸುತ್ತಿರುವ ಪಿಂಚಣಿಗಳ ಸಂಬಂಧ ನೂತನ ಜಿಲ್ಲಾ ಖಜಾನೆಗಳಲ್ಲಿ ಜಿಲ್ಲೆಗೆ ಒಳಪಡುವ ಉಪ ಖಜಾನೆಗಳ ಡಾಟಾ ಬೇಸ್‌ನ್ನು ಪ್ರತ್ಯೇಕವಾಗಿ ಇಡುವುದು. ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳ ಮೂಲಕ ಪಾವತಿಸುತ್ತಿರುವ ಪಿಂಚಣಿಗಳ ಸಂಬಂಧ ಡಾಟಾ ಬೇಸ್ ಕಾರ್ಯವನ್ನು ಖಜಾನೆಗಳು ಕೈಗೊಂಡಿದ್ದು, ನೂತನ ಜಿಲ್ಲಾ ಖಜಾನೆಗಳ ವ್ಯಾಪ್ತಿಗೆ ಬರುವ ಪಿಂಚಣಿಯನ್ನು ಪ್ರತ್ಯೇಕಗೊಳಿಸಿ ನಿರ್ವಹಿಸುವುದು.
- ವಿಜಯನಗರ ಜಿಲ್ಲೆಯಲ್ಲಿ ಹೊಸದಾಗಿ ಸೃಜಿಸಲಾಗಿರುವ ಹೊಸ ಕಚೇರಿಗಳು ದಿನಾಂಕ:31-03-2022ರವರೆಗೆ ಪ್ರಸ್ತುತ ಸಂಬಂಧಿಸಿದ ಉಪ ಖಜಾನೆಗಳಿಂದಲೇ ವೇತನ, ಭತ್ಯೆ ಮುಂತಾದ ನಗದು ವಹಿವಾಟುಗಳನ್ನು ಸೆಳೆಯುವುದು. ದಿನಾಂಕ:01-04-2022ರಿಂದ ಹೊಸ ಜಿಲ್ಲೆಯಲ್ಲಿನ ಕಚೇರಿಗಳು ನೂತನ ಜಿಲ್ಲಾ ಖಜಾನೆಯಿಂದ ವೇತನ, ಭತ್ಯೆ ಮುಂತಾದ ನಗದು ವಹಿವಾಟುಗಳನ್ನು ಸೆಳೆಯುವುದು ಈ ಕುರಿತು ಮಹಾಲೇಖಪಾಲರು ಪ್ರಾಧೀಕರಿಸಲು ಕ್ರಮಕೈಗೊಳ್ಳುವುದು.
- ದಿನಾಂಕ:01-04-2022ರಿಂದ ನೂತನ ಜಿಲ್ಲಾ ಖಜಾನೆಯ ವ್ಯಾಪ್ತಿಗೊಳಪಡುವ ಉಪ ಖಜಾನೆಗಳು ನೂತನ ಜಿಲ್ಲಾ ಖಜಾನೆಗೆ ಲೆಕ್ಕಗಳನ್ನು ರವಾನಿಸುವುದು.
- ದಿನಾಂಕ:01-04-2022 ರಿಂದ ನೂತನ ಜಿಲ್ಲಾ ಖಜಾನೆಯು ಪ್ರತ್ಯೇಕವಾಗಿ ಲೆಕ್ಕ ನಿರ್ವಹಿಸುವ ಘಟಕವಾಗುವುದರಿಂದ ಕರ್ನಾಟಕ ಖಜಾನೆ ಸಂಹಿತೆ ಅನುಚ್ಛೇಧ 133ರ ಪ್ರಕಾರ ಸವಿವರ ಲೆಕ್ಕಗಳನ್ನು (ವ್ಯಾಪ್ತಿಗೊಳಪಡುವ ಉಪ ಖಜಾನೆಗಳ ಲೆಕ್ಕಗಳು ಒಳಗೊಂಡಂತೆ)

....4

ಮಹಾಲೇಖಪಾಲರಿಗೆ ಹಾಗೂ ಸಂಬಂಧಿಸಿದ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಗಳಿಗೆ ಕಳುಹಿಸುವುದು.

- ನೂತನ ಜಿಲ್ಲಾ ಖಜಾನೆಯ ಜಿಲ್ಲಾ ಖಜಾನಾಧಿಕಾರಿಗಳು ಅವರ ವ್ಯಾಪ್ತಿಗೊಳಪಡುವ ಉಪ ಖಜಾನೆಗಳಿಗೆ ನಿಯಂತ್ರಣಾಧಿಕಾರಿಗಳಾಗಿದ್ದು, ಅವುಗಳ ಸಮರ್ಪಕ ಕಾರ್ಯ ನಿರ್ವಹಣೆಗೆ ಜವಾಬ್ದಾರರಾಗಿರುತ್ತಾರೆ.
- ನೂತನ ಜಿಲ್ಲಾ ಖಜಾನೆ ಹಾಗೂ ಅದರ ವ್ಯಾಪ್ತಿಯೊಳಗಿರುವ ಉಪ ಖಜಾನೆಗಳ ನಗದು ವಹಿವಾಟುಗಳನ್ನು ಈ ಹಿಂದೆ ಇದ್ದ ಏಜೆನ್ಸಿ ಬ್ಯಾಂಕ್ ಗಳು ಮುಂದುವರೆಸಿಕೊಂಡು ಹೋಗುತ್ತವೆ.
- ರಾಜ್ಯ ವಲಯ ಹಾಗೂ ಜಿಲ್ಲಾ ಪಂಚಾಯತ್ ವಲಯದ ಬಿಲ್ಲುಗಳಲ್ಲಿನ ವೆಚ್ಚಕ್ಕೆ ಈಗ ಆಯವ್ಯಯ ನಿಯಂತ್ರಣದ ವ್ಯವಸ್ಥೆಯು ಜಾರಿಯಲ್ಲಿರುವುದರಿಂದ ಹೊಸ ಕಚೇರಿ ಪ್ರಾರಂಭವಾಗುವ ದಿನಾಂಕದವರೆಗೆ ಹಳೆಯ ಕಚೇರಿಯು ಮಾಡಿದ ವೆಚ್ಚಗಳ ಹಾಗೂ ಹೊಸ ಜಿಲ್ಲೆಯಲ್ಲಿನ ಅಧಿಕಾರಿಗಳಿಗೆ ಅನುದಾನ ಬಿಡುಗಡೆಗೊಳಿಸುವುದು.
- ಹೊಸಪೇಟೆ ಉಪ ಖಜಾನೆ ಇರುವ ಕಟ್ಟಡವು ಎರಡು ಮಹಡಿ (Duplex) ಕಟ್ಟಡವಾಗಿದ್ದು ವಿಶಾಲವಾದ ಸ್ಥಳಾವಕಾಶ ಹೊಂದಿರುವುದರಿಂದ, ಈ ಉಪ ಖಜಾನೆಯಲ್ಲಿಯೇ ವಿಜಯನಗರ ಜಿಲ್ಲಾ ಖಜಾನೆಯನ್ನು ಪ್ರಾರಂಭಿಸುವುದು ಹಾಗೂ ಪ್ರಸ್ತುತ ಇರುವ ಹೊಸಪೇಟೆ ಉಪ ಖಜಾನೆಯ ಭದ್ರಕೋಣೆಯನ್ನು ಬಳಸಿಕೊಳ್ಳುವುದು.
- ನೂತನ ಜಿಲ್ಲಾ ಖಜಾನೆಯ ಲೆಕ್ಕ ನಿರ್ವಹಣೆ ಹಾಗೂ ಲೆಕ್ಕಪತ್ರಗಳ ಸಲ್ಲಿಸುವಿಕೆ ಪ್ರಕ್ರಿಯೆಗಳ ಬಗ್ಗೆ ಕರ್ನಾಟಕ ಖಜಾನೆ ಸಂಹಿತೆ ಚೌಕಟ್ಟಿನೊಳಗೆ ಸೂಕ್ತ ಸೂಚನೆಗಳನ್ನು ನೀಡಲು ಖಜಾನೆ ಆಯುಕ್ತರಿಗೆ ಅನುಮತಿ ನೀಡಲಾಗಿದೆ.
- ಹೊಸ ಜಿಲ್ಲೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಆದೇಶವನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನೇತ್ರಪ್ರಭಾ ಎಂ. ಧಾಯಪುಲೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು).

26/11/2021

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

**ಪ್ರತಿ:**

1) ಪ್ರಧಾನ ಮಹಾಲೇಖಪಾಲರು (ಎ&ಯು) (ಎ&ಇ) 1&2,) ಕರ್ನಾಟಕ, ಬೆಂಗಳೂರು.

2) ಸರ್ಕಾರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6) ಆಯುಕ್ತರು, ಖಜಾನೆ ಇಲಾಖೆ, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು.
7) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
8) ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10) ಸರ್ಕಾರದ ಅಪರ ಕಾರ್ಯದರ್ಶಿಯವರ (ಆಡಳಿತ ಮತ್ತು ಸಮನ್ವಯ) ಆಪ್ತ ಸಹಾಯಕರು ವಿಧಾನಸೌಧ ಬೆಂಗಳೂರು.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 36 ಎಸ್‌ಆರ್‌ಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 14.12.2021

## ಸುತ್ತೋಲೆ

ವಿಷಯ: ಅಂತರ್ಜಾಲ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸರ್ಕಾರಿ ನೌಕರರ ನಡತೆಯು ಕನಾಸೇ( ನಡತೆ) ನಿಯಮಗಳು, 2021ಗೆ ಒಳಪಡುವ ಬಗ್ಗೆ.

*******

ಕರ್ನಾಟಕ ರಾಜ್ಯ ನಾಗರಿಕ ಸೇವಾ(ನಡತೆ) ನಿಯಮಗಳು, 2021ರ ನಿಯಮ 3(1)ರ ಅನುಸಾರ ಪ್ರತಿಯೊಬ್ಬ ಸರ್ಕಾರಿ ನೌಕರನು ಎಲ್ಲಾ ಕಾಲಗಳಲ್ಲಿಯೂ ಸಂಪೂರ್ಣ ನೀತಿ ನಿಷ್ಠೆಯನ್ನು ಹೊಂದಿರತಕ್ಕದ್ದು ಹಾಗೂ ಸರ್ಕಾರಿ ನೌಕರನಿಗೆ ಅನುಚಿತವಾದ ಯಾವುದನ್ನೂ ಮಾಡತಕ್ಕದ್ದಲ್ಲ. ಅದೇ ನಿಯಮಗಳ ನಿಯಮ 3(2)ರ ಅನುಸಾರ ಪ್ರತಿಯೊಬ್ಬ ಸರ್ಕಾರಿ ನೌಕರನು ರಾಜಕೀಯವಾಗಿ ತಟಸ್ಥನಾಗಿರತಕ್ಕದ್ದು. ಮುಂದುವರೆದು, ಅದೇ ನಿಯಮಗಳ ನಿಯಮ 3(5)ರ ಅನುಸಾರ ಪ್ರತಿಯೊಬ್ಬ ಸರ್ಕಾರಿ ನೌಕರನು ಸಾರ್ವಜನಿಕ ಸುವ್ಯವಸ್ಥೆ, ಸಭ್ಯತೆ ಮತ್ತು ನೈತಿಕತೆಯನ್ನು ಸಮರ್ಥಿಸತಕ್ಕದ್ದು ಮತ್ತು ಎತ್ತಿಹಿಡಿಯತಕ್ಕದ್ದು; ಅಲ್ಲದೇ ನ್ಯಾಯಸಮ್ಮತವಾಗಿ ಮತ್ತು ನಿಷ್ಪಕ್ಷಪಾತದಿಂದ ಕಾರ್ಯನಿರ್ವಹಿಸತಕ್ಕದ್ದು ಹಾಗೂ ಯಾವುದೇ ವ್ಯಕ್ತಿಯ ಅಥವಾ ಪಕ್ಷದ ಬಗ್ಗೆ ತಾರತಮ್ಯ ಮಾಡತಕ್ಕದ್ದಲ್ಲ.

2021ರ ನಿಯಮಗಳ ನಿಯಮ 10ರ ಅನುಸಾರ ಆಕಾಶವಾಣಿ, ದೂರದರ್ಶನ ಪ್ರಸಾರ, ಚಲನಚಿತ್ರ ಅಥವಾ ಬರವಣಿಗೆಯು ಸಂಪೂರ್ಣವಾಗಿ ಸಾಹಿತ್ಯಕ, ಕಲಾತ್ಮಕ ಅಥವಾ ವೈಜ್ಞಾನಿಕ ಸ್ವರೂಪದ್ದಾಗಿರದ ಹೊರತು ಸರ್ಕಾರಿ ನೌಕರನು ನೇಮಿಸಲಾದ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆಯಬೇಕಾಗುತ್ತದೆ. ಮುಂದುವರೆದು, ನಿಯಮ 10ರ 2ನೇ ಪರಂತುಕದಲ್ಲಿ ಇಂತಹ ಚಟುವಟಿಕೆಗಳಿಂದ ಸರ್ಕಾರಿ ನೌಕರರ ಅಧಿಕೃತ ಕರ್ತವ್ಯಗಳಿಗೆ ಭಾದಕವಾಗಬಾರದು ಎಂದು ಸ್ಪಷ್ಟಪಡಿಸಲಾಗಿದೆ. ಅದೇ ನಿಯಮಗಳ ನಿಯಮ 11ರ ಅನುಸಾರ ಸರ್ಕಾರಿ ನೌಕರನು ಕರ್ನಾಟಕ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಪ್ರಸ್ತುತ ಅಥವಾ ಇತ್ತೀಚಿನ ಯಾವುದೇ ನೀತಿಯ ಅಥವಾ ಕ್ರಮದ ಬಗ್ಗೆ ಪ್ರತಿಕೂಲ ಟೀಕೆಯ ಪರಿಣಾಮ ಹೊಂದಿರುವಂತಹ ಯಾವುದೇ ಸಂಗತಿಗಳ ನಿರೂಪಣೆಯನ್ನು ಮಾಡತಕ್ಕದ್ದಲ್ಲ ಅಥವಾ ಅಭಿಪ್ರಾಯವನ್ನು ವ್ಯಕ್ತಪಡಿಸತಕ್ಕದ್ದಲ್ಲ. ಸರ್ಕಾರಿ ನೌಕರರ ಮಾನ್ಯತೆ ಪಡೆದ ಸಂಘದ ಪದಾಧಿಕಾರಿಗಳು ಸರ್ಕಾರಿ ನೌಕರರ ಸೇವಾ ಸ್ಥಿತಿ ಗತಿ ರಕ್ಷಿಸುವ ಅಥವಾ ಅವುಗಳಲ್ಲಿ ಸುಧಾರಣೆಯನ್ನು ಸುನಿಶ್ಚಿತಗೊಳಿಸುವ ಉದ್ದೇಶಗಳಿಗಾಗಿ ವ್ಯಕ್ತಪಡಿಸಿದ ಪ್ರಾಮಾಣಿಕ ಅಭಿಪ್ರಾಯಗಳಿಗೆ ಇದರಿಂದ ವಿನಾಯಿತಿ ನೀಡಲಾಗಿದೆ.

ಮೇಲಿನ ನಿಯಮಗಳು ಓರ್ವ ಸರ್ಕಾರಿ ನೌಕರನು ಸಮಾಜದಲ್ಲಿ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕೆಂಬುದನ್ನು ಸ್ಪಷ್ಟಪಡಿಸುತ್ತವೆ. ಆದರೆ, ಇತ್ತೀಚಿನ ದಿನಗಳಲ್ಲಿ ಕೆಲವು ಸರ್ಕಾರಿ ನೌಕರರು ಅಂತರ್ಜಾಲದ ವೆಬ್‌ಸೈಟ್‌ಗಳಲ್ಲಿ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ 2021ರ ನಡತೆ ನಿಯಮಗಳ ಅವಕಾಶಗಳನ್ನು ಮೀರಿ ಸರ್ಕಾರ ಮತ್ತು ಇತರೆ ಸರ್ಕಾರಿ ನೌಕರರಿಗೆ ಮುಜುಗರ ಉಂಟುಮಾಡುವಂತೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುವುದು ಕಂಡುಬರುತ್ತಿದೆ. ಅಲ್ಲದೆ, ಸರ್ಕಾರದ ನೀತಿಗೆ ವಿರುದ್ಧವಾದ ಅಥವಾ ನಿರ್ದಿಷ್ಟ ರಾಜಕೀಯ ಪಕ್ಷಕ್ಕೆ ಸಂಬಂಧಿಸಿದ ಲೇಖನ, ಅಭಿಪ್ರಾಯ ಮತ್ತು ವೀಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವುದನ್ನು ಗಮನಿಸಲಾಗಿದೆ.

...2

ಅಂತರ್ಜಾಲದಲ್ಲಿ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸರ್ಕಾರಿ ನೌಕರನು ಪ್ರದರ್ಶಿಸುವ ವರ್ತನೆಯು ಸಹ ಕರ್ನಾಟಕ ರಾಜ್ಯ ನಾಗರಿಕ ಸೇವಾ(ನಡತೆ) ನಿಯಮಗಳು, 2021ರ ವ್ಯಾಪ್ತಿಗೆ ಒಳಪಡುತ್ತವೆ. ಈ ನಿಯಮಗಳಿಗೆ ವ್ಯತಿರಿಕ್ತವಾಗಿ ನಡೆದುಕೊಳ್ಳುವ ಸರ್ಕಾರಿ ನೌಕರರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ಅವಕಾಶಗಳನ್ವಯ ಶಿಸ್ತುಕ್ರಮ ಕೈಗೊಳ್ಳುವಂತೆ ಸಕ್ಷಮ ಪ್ರಾಧಿಕಾರಗಳಿಗೆ ಈ ಮೂಲಕ ತಿಳಿಸಲಾಗಿದೆ.

14/1/2024
(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-

ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 45 ಸೇನಿಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 10.12.2021

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಯನ್ನು ನಿಗಧಿತ ಸಮಯಕ್ಕೆ ಸಲ್ಲಿಸುವ ಬಗ್ಗೆ.

*******

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮಗಳು ಪರಿಷ್ಕೃತವಾಗಿ ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021, ದಿನಾಂಕ:07.01.2021ರಿಂದ ಜಾರಿಗೆ ಬಂದಿರುತ್ತವೆ. ಸದರಿ ನಿಯಮಗಳ ನಿಯಮ 24ರಲ್ಲಿ ಸರ್ಕಾರಿ ನೌಕರರು ಚರ/ಸ್ಥಿರ ಆಸ್ತಿ ಖರೀದಿ/ವಿಲೇ ಮಾಡುವುದಕ್ಕೆ ಸಂಬಂಧಿಸಿದಂತೆ ಉಪಬಂಧಗಳನ್ನು ಕಲ್ಪಿಸಲಾಗಿದೆ.

ಪ್ರತಿಯೊಬ್ಬ ಸರ್ಕಾರಿ ನೌಕರನು ಯಾವುದಾದರು ಸೇವೆಗೆ ಅಥವಾ ಹುದ್ದೆಗೆ ಮೊದಲು ನೇಮಕವಾಗುವಾಗ, ಆತನು ತನ್ನ ಸ್ವಂತ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲಿ ಅಥವಾ ಯಾವುದೇ ಇತರೆ ವ್ಯಕ್ತಿಯ ಹೆಸರಿನಲ್ಲಾಗಲಿ ಪಿತ್ರಾರ್ಜಿತವಾಗಿ ಬಂದ ಸ್ವಯಂ ಅರ್ಜಿಸಿದ ಅಥವಾ ಗುತ್ತಿಗೆ ಅಥವಾ ಅಡಮಾನದ ಮೇಲೆ ತಾನು ಹೊಂದಿರುವ ಸ್ಥಿರಾಸ್ತಿಯ ಸಂಪೂರ್ಣ ವಿವರಗಳನ್ನು ನೀಡಿ, ನಿಗದಿತ ನಮೂನೆಯಲ್ಲಿ ತನ್ನ ಚರ ಮತ್ತು ಸ್ಥಿರಾಸ್ತಿಗಳ ವಿವರ ಪಟ್ಟಿಯನ್ನು ಪೂರಕ ದಾಖಲೆಗಳೊಂದಿಗೆ ಮೂರು ತಿಂಗಳೊಳಗೆ ಸಲ್ಲಿಸಬೇಕಾಗಿರುತ್ತದೆ. ತರುವಾಯ ಸರ್ಕಾರಿ ನೌಕರನು ಡಿಸೆಂಬರ್ 31ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳಿಗೊಮ್ಮೆ ತನ್ನ ಮತ್ತು ತನ್ನ ಕುಟುಂಬದ ಎಲ್ಲ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ಸಲ್ಲಿಸಬೇಕಾಗಿರುತ್ತದೆ. ಅಲ್ಲದೇ, ನಿಯಮ 24 ರಲ್ಲಿನ ಉಪಬಂಧಗಳಂತೆ ಪ್ರತಿಯೊಬ್ಬ ಸರ್ಕಾರಿ ನೌಕರನು ಚರ ಮತ್ತು ಸ್ಥಿರಾಸ್ತಿಗೆ ಸಂಬಂಧಿಸಿದಂತೆ ನಿಯಮಗಳಲ್ಲಿ ತಿಳಿಸಿರುವ ಸಂದರ್ಭಗಳಲ್ಲಿ ಅನುಮತಿ ಪಡೆಯುವುದು ಹಾಗೂ ವರದಿ ಮಾಡುವುದು ಅವಶ್ಯವಾಗಿರುತ್ತದೆ.

ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಕರ್ತವ್ಯವಾಗಿದ್ದು, ನಿಯಮಗಳಲ್ಲಿ ನಿಗದಿಪಡಿಸಿರುವ ಸಮಯದಲ್ಲಿ ಸಲ್ಲಿಸುವುದು ಸಹ ಅಗತ್ಯವಾಗಿರುತ್ತದೆ. ಇಲ್ಲವಾದಲ್ಲಿ ನಡತೆ ನಿಯಮಗಳಿಗೆ ವ್ಯತಿರಿಕ್ತ ನಡವಳಿಕೆ ಪ್ರದರ್ಶಿಸಿದ ಕಾರಣ ಅಂತಹ ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅವಕಾಶವಿರುತ್ತದೆ. ಆದಾಗ್ಯೂ ಬಹುತೇಕ ಸರ್ಕಾರಿ ನೌಕರರು ತಮ್ಮ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ಎಲ್ಲಾ ನೌಕರರು ತಮ್ಮ ಚರ ಮತ್ತು ಸ್ಥಿರಾಸ್ತಿ ವ್ಯವಹರಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಹಾಗೂ ಇಲಾಖಾ ಮುಖ್ಯಸ್ಥರು ಮೇಲಿನ ಸೂಚನೆಗಳನ್ನು ತಮ್ಮ ಆಡಳಿತ ವ್ಯಾಪ್ತಿಗೆ ಬರುವ ಎಲ್ಲಾ ಅಧಿಕಾರಿ/ ನೌಕರರ ಗಮನಕ್ಕೆ ತರುವಂತೆ ತಿಳಿಸಲಾಗಿದೆ.

10/12/2021
(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-
ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

...2

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)

GOVERNMENT OF KARNATAKA

No : FD 685 Exp-12/2021

Karnataka Government Secretariat
Vidhana Soudha
Bangalore, dated:29.11.2021.

ES TS
9-12-2021

CIRCULAR

Sub : Opening and Processing of tenders – Specifying the timelines.

*****

1. The Procurement Entity as defined under Section 2(d) of Karnataka Transparency in Public Procurements Act, 1999 is required to procure goods and services only by inviting the tenders as per the procedure outlined in the Karnataka Transparency in Public Procurements Act, 1999 and Rules, 2000. Rule 28 of KTPP Rules, 2000 prescribes that evaluation of tenders and award of contract shall be completed as far as possible, within the period for which the tenders are held valid. Hence, in order to complete the evaluation of technical and financial bids in a time bound manner and to ensure transparency in the procurement process, it has been felt necessary to prescribe the timelines for each stage of the evaluation of the tender.

2. In view of the above, the detailed timelines for each activity are prescribed as bellow;

| Sl No | Activity | Timeline from the last date for submission of tender |
|---|---|---|
| 1 | Opening of technical bid | Within 48 hours |
| 2 | Evaluation of Technical Bid to be completed | On or before 30th day |
| 3 | Opening of Financial Bid | On or before 35th day |
| 4 | Evaluation of Financial Bid to be completed | On or before 50th day |
| 5 | Awarding of contract and Issue of LoI | On or before 70th day |
| 6 | Furnishing of performance security and entering into agreement | On or before 90th day |
| 7 | Issue of work order/purchase order | On or before 91st day |

3743
30/12/21

3. Any relaxation in the above timelines shall be specifically authorised by the authority superior to the Tender Accepting Authority for the reasons to be recorded in writing.

...2

4. All Procurement Entities shall ensure that the above guidelines are strictly followed. It may be noted that any violation attracts the penal provision under Section 23 of the KTPP Act.

(I.S.N.PRASAD)
Additional Chief Secretary to Government
Finance Department

To:

All Procurement Entities of Government of Karnataka.